ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ,
ದಕ್ಷಿಣ ಕನ್ನಡ ಜಿಲ್ಲೆ,
ಮಂಗಳೂರು – 575 001.

ಕರ್ನಾಟಕ ಸರಕಾರ
( ಕಂದಾಯ ಇಲಾಖೆ )

Deputy Commissioner &
District Magistrate's Office,
Dakshina Kannada District,
Mangaluru – 575 001.

ನಂ. ಎಂಎಜಿ(2)ಸಿಆರ್ 156/2021/133465/ಸಿ4/39 ದಿನಾಂಕ: 09-09-2021

## ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಹಾಗೂ ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರ ನಡವಳಿ

ವಿಷಯ : ಕೋವಿಡ್-19 ಹಿನ್ನಲೆಯಲ್ಲಿ ಜಿಲ್ಲೆಯಾದ್ಯಂತ ಹೊಸ ಮಾರ್ಗಸೂಚಿಗಳನ್ನು ಅನುಷ್ಠಾನಗೊಳಿಸುವ ಬಗ್ಗೆ.

ಉಲ್ಲೇಖ : 1) ಈ ಕಛೇರಿ ಆದೇಶ ಸಂಖ್ಯೆ: ಎಂಎಜಿ(2)ಸಿಆರ್ 156/2021/133465/ಸಿ4/35 ; ದಿನಾಂಕ: 31-08-2021.

2) ಈ ಕಛೇರಿ ಆದೇಶ ಸಂಖ್ಯೆ: ಎಂಎಜಿ(2)ಸಿಆರ್ 156/2021/133465/ಸಿ4/38 ; ದಿನಾಂಕ: 08-09-2021.

=======@=======

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋವಿಡ್-19 ನಿಯಂತ್ರಣಕ್ಕೆ ಸಂಬಂಧಿಸಿದಂತೆ ಜಿಲ್ಲಾಡಳಿತವು ಸರ್ಕಾರದ ನಿರ್ದೇಶನದಂತೆ ಕಾಲಕಾಲಕ್ಕೆ ಎಲ್ಲಾ ಅವಶ್ಯಕ ಕ್ರಮಗಳನ್ನು ಕೈಗೊಳ್ಳುತ್ತಿದೆ ಹಾಗೂ ಜಿಲ್ಲೆಯಾದ್ಯಂತ ಉಲ್ಲೇಖ (1) ರಂತೆ ಕೋವಿಡ್ ಮಾರ್ಗಸೂಚಿಗಳನ್ನು ಜ್ಯಾರಿಗೊಳಿಸಿ ಆದೇಶಿಸಲಾಗಿರುತ್ತದೆ. ಅಲ್ಲದೇ, ಕೇರಳ ರಾಜ್ಯದಲ್ಲಿ ಕೋವಿಡ್-19 ಪ್ರಕರಣಗಳ ಸಂಖ್ಯೆಯಲ್ಲಿ ಗಣನೀಯ ಏರಿಕೆಯಾಗುತ್ತಿರುವ ಹಿನ್ನಲೆಯಲ್ಲಿ ಕೇರಳ ರಾಜ್ಯಕ್ಕೆ ಸಂಚರಿಸುವವರಿಗೆ ಸಂಬಂಧಿಸಿ ಉಲ್ಲೇಖ (2) ರಂತೆ ವಿಶೇಷ ಸೂಚನೆಗಳನ್ನು ಕೂಡಾ ನೀಡಲಾಗಿರುತ್ತದೆ.

ಪ್ರಸ್ತುತ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋವಿಡ್-19 ಪಾಸಿಟಿವಿಟಿ ದರವು ಇಳಿಮುಖವಾದ ಹಿನ್ನಲೆಯಲ್ಲಿ ಜಿಲ್ಲೆಯ ಪ್ರಸಕ್ತ ವಿದ್ಯಮಾನಗಳನ್ನು ಹಾಗೂ ಕೋವಿಡ್-19 ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಸಾರ್ವಜನಿಕ ಹಿತದೃಷ್ಟಿಯಿಂದ **ಡಾ|| ರಾಜೇಂದ್ರ ಕೆ.ವಿ., ಭಾ.ಆ.ಸೇ. ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಹಾಗೂ ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು** ಆದ ನಾನು ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 34 ಹಾಗೂ ದಂಡ ಪ್ರಕ್ರಿಯಾ ಸಂಹಿತೆ 1973 ರ ಕಲಂ 144 (3) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ದಿನಾಂಕ: 09-09-2021 ರಿಂದ ಅನ್ವಯವಾಗುವಂತೆ ಮುಂದಿನ ಆದೇಶದವರೆಗೆ ಈ ಕೆಳಗಿನಂತೆ ಹೊಸ ಮಾರ್ಗಸೂಚಿಗಳನ್ನು ಅನುಷ್ಠಾನಗೊಳಿಸಿ ಆದೇಶಿಸಿರುತ್ತೇನೆ.

1. ಜಿಲ್ಲೆಯಾದ್ಯಂತ ಎಲ್ಲಾ ದಿನಗಳಲ್ಲಿ ರಾತ್ರಿ ಗಂಟೆ 9.00 ರಿಂದ ಬೆಳಿಗ್ಗೆ ಗಂಟೆ 5.00 ರವರೆಗೆ ರಾತ್ರಿ ಕರ್ಫ್ಯೂ ಜಾರಿಯಲ್ಲಿರುತ್ತದೆ
2. ಎಲ್ಲಾ ತರಹದ ಅಂಗಡಿ ಮುಂಗಟ್ಟುಗಳನ್ನು ಬೆಳಿಗ್ಗೆ ಗಂಟೆ 05-00 ರಿಂದ ರಾತ್ರಿ ಗಂಟೆ 09-00 ರವರೆಗೆ ಕೋವಿಡ್ ಸಮುಚಿತ ವರ್ತನೆಗಳೊಂದಿಗೆ ಕಾರ್ಯಾಚರಿಸಲು ಅನುಮತಿಸಿದೆ
3. ಎಲ್ಲಾ ಅಂಗಡಿಗಳಲ್ಲಿರುವ ಮಾಲೀಕರು /ಸಿಬ್ಬಂದಿಗಳು ಕನಿಷ್ಠ 1 ಡೋಸ್ ಲಸಿಕೆ ತೆಗೆದುಕೊಳ್ಳುವುದು
4. ಎಲ್ಲಾ ಅಂಗಡಿಗಳಲ್ಲಿರುವ ಮಾಲೀಕರು /ಸಿಬ್ಬಂದಿಗಳು ಪ್ರತೀ 10 ದಿನಗಳಿಗೊಮ್ಮೆ ಕೋವಿಡ್-19 ಪರೀಕ್ಷೆಗೆ ಒಳಪಟ್ಟು RT-PCR ನೆಗೆಟಿವ್ ವರದಿಯನ್ನು ಅಧಿಕಾರಿಗಳು ಭೇಟಿ ನೀಡಿದ ಸಂದರ್ಭದಲ್ಲಿ ಹಾಜರುಪಡಿಸುವುದು
5. ಆರೋಗ್ಯಾಧಿಕಾರಿಗಳು / ಸ್ಥಳೀಯ ಆಡಳಿತಗಳು ಕೋವಿಡ್ ತಪಾಸಣೆಗಾಗಿ ಭೇಟಿ ನೀಡಿದ ಸಂದರ್ಭದಲ್ಲಿ ಅವರೊಂದಿಗೆ ಸಹಕರಿಸುವುದು
6. ದಕ್ಷಿಣ ಕನ್ನಡ ಜಿಲ್ಲೆಯ ಗಡಿ ಭಾಗಗಳಲ್ಲಿ ಈಗಾಗಲೇ ವಿಧಿಸಲಾಗಿರುವ ನಿರ್ಬಂಧಗಳು / ಮಾರ್ಗಸೂಚಿಗಳು ಯಥಾವತ್ತಾಗಿ ಮುಂದುವರೆಯುವುದು
7. ಸಾರ್ವಜನಿಕರು ಕೋವಿಡ್ ಸಮುಚಿತ ವರ್ತನೆಯನ್ನು ಕಡ್ಡಾಯವಾಗಿ ಪಾಲಿಸುವುದು (ಮುಖ ಗವಸು, ಸ್ಯಾನಿಟೈಸರ್ ಮತ್ತು ಸಾಮಾಜಿಕ ಅಂತರ)

ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಅಂತಹವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 51 ರಿಂದ 60 ರನ್ವಯ, ಐಪಿಸಿ ಕಲಂ 188 ರಂತೆ ಮತ್ತು ಕರ್ನಾಟಕ ಸಾಂಕ್ರಾಮಿಕ ರೋಗಗಳ ಅಧಿನಿಯಮ 2020 ರ ಕಲಂ 4, 5 ಮತ್ತು 10 ರಂತೆ ಕ್ರಮ ಜರುಗಿಸಲಾಗುವುದು.

ಈ ಆದೇಶವನ್ನು ದಿನಾಂಕ: 09-09-2021 ರಂದು ನನ್ನ ಸ್ವಹಸ್ತಾಕ್ಷರ ಮತ್ತು ಮುದ್ರೆಯೊಂದಿಗೆ ಹೊರಡಿಸಲಾಗಿದೆ.

DISTRICT MAGISTRATE, D.K.
GOVT. OF KARNATAKA
ಕರ್ನಾಟಕ ಸರಕಾರ
ಜಿಲ್ಲಾ ದಂಡಾಧಿಕಾರಿ, ದ.ಕ.

09/09/2021
ಡಾ|| ರಾಜೇಂದ್ರ ಕೆ.ವಿ. ಭಾ.ಆ.ಸೇ.,
ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,
ಹಾಗೂ ಅಧ್ಯಕ್ಷರು,
ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

ಗೆ,

1. ಪೊಲೀಸ್ ಆಯುಕ್ತರು, ಮಂಗಳೂರು ನಗರ - ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ
2. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್, ಮಂಗಳೂರು

3. ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು - ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.

4. ಆಯುಕ್ತರು, ಮಹಾನಗರ ಪಾಲಿಕೆ, ಮಂಗಳೂರು.

5. ಉಪ ಆಯುಕ್ತರು, ಅಬಕಾರಿ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

6. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

7. ಸಹಾಯಕ ಆಯುಕ್ತರು, ಮಂಗಳೂರು / ಪುತ್ತೂರು ಉಪವಿಭಾಗ.

8. ಪ್ರಾದೇಶಿಕ ಸಾರಿಗೆ ಅಧಿಕಾರಿ, ಮಂಗಳೂರು / ಪುತ್ತೂರು / ಬಂಟ್ವಾಳ.

9. ವಿಭಾಗೀಯ ನಿಯಂತ್ರಣಾಧಿಕಾರಿ, ಕೆ.ಎಸ್.ಆರ್.ಟಿ.ಸಿ. ಮಂಗಳೂರು / ಪುತ್ತೂರು.

10. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

11. ಜಿಲ್ಲೆಯ ಎಲ್ಲಾ ತಹಶೀಲ್ದಾರರುಗಳಿಗೆ.

12. ಜಿಲ್ಲೆಯ ಎಲ್ಲಾ ತಾಲೂಕು ಆರೋಗ್ಯಾಧಿಕಾರಿಗಳಿಗೆ.

13. ಎಲ್ಲಾ ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳಿಗೆ.

14. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು - ಇವರು ಜಿಲ್ಲೆಯ ಎಲ್ಲಾ ಪ್ರಮುಖ ಸುದ್ದಿ ಮಾಧ್ಯಮಗಳಲ್ಲಿ ಪ್ರಚುರ ಪಡಿಸಲು ತಿಳಿಸಿದೆ.

DISTRICT MAGISTRATE, D.K. GOVT. OF KARNATAKA ಕರ್ನಾಟಕ ಸರಕಾರ ಜಿಲ್ಲಾ ದಂಡಾಧಿಕಾರಿ, ದ.ಕ

Website: www.dk.nic.in Phone: 0824-2220588 Fax: 0824-2441564 Email:dc.mnglr@gmail.com